ಪರೀಕ್ಷಿಸಿಕೊಂಡ ನಂತರವೇ ಸರಬರಾಜು ಮಾಡುವಂತೆ ತೀರ್ಮಾನ ಕೈಗೊಳ್ಳಲಾಗಿದೆ.

ಇನ್ನುಳಿದಂತೆ, ಯಾವುದೇ ಔಷಧ ಕಂಪನಿಗಳೊಂದಿಗೆ ಒಪ್ಪಂದ ಮಾಡಿಕೊಂಡಿರುವುದಿಲ್ಲ.

ಉ) ರಿಯಾಯಿತಿ ದರದಲ್ಲಿ ಔಷಧಗಳನ್ನು ನೀಡುವಲ್ಲಿ ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆ ಉಂಟಾಗುವುದಿಲ್ಲ.

ಊ) ಮೇಲಿನ ಉತ್ತರಗಳಿಂದಾಗಿ ಪ್ರಶ್ನೆ ಉದ್ಭವಿಸುವುದಿಲ್ಲ.

ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ಕೊರತೆ

109 (211) ಶ್ರೀ ಅಮರೇಶ್ (ಮುಳಬಾಗಿಲು) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ವಿದ್ಯುತ್ ಟ್ರಾನ್ಸ್ ಫಾರ್ಮರ್‌ಗಳ ಕೊರತೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಟ್ರಾನ್ಸ್‌ಫಾರ್ಮರ್‌ಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು);

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) ರಾಜ್ಯದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳು ಸ್ವಲ್ಪಮಟ್ಟಿನ ವಿದ್ಯುತ್ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಕೊರತೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಕೊರತೆಯನ್ನು ನೀಗಿಸಲು ಈ ಕೆಳಕಂಡ ಕ್ರಮಗಳನ್ನು ಸರ್ಕಾರವು ಕೈಗೊಳ್ಳುತ್ತಿದೆ.

ಅ) ವಿವಿಧ ಕಾರಣಗಳಿಂದ ವಿಫಲಗೊಳ್ಳುವ ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ಶೀಘ್ರಗತಿಯಲ್ಲಿ ಬದಲಾಯಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ, ವಿಫಲವಾಗುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಶೀಘ್ರಗತಿಯಲ್ಲಿ ದುರಸ್ತಿಗೊಳಿಸಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಲಭ್ಯತೆಯನ್ನು ಹೆಚ್ಚಿಸಲು ರಾಜ್ಯಾದ್ಯಂತ ಒಟ್ಟು 67 ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸಕ್ತ ಸಾಲಿನಲ್ಲಿ (2012–13) ಜೂನ್ 2012ರ ಅಂತ್ಯದವರೆಗೆ ಈ

ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳಿಂದ ಒಟ್ಟು 14,018 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿಗೊಳಿಸ ಲಾಗಿರುತ್ತದೆ.

ಆ) ಬೆಂಗಳೂರಿನಲ್ಲಿ ಬೃಹತ್ ಪರಿವರ್ತಕ ದುರಸ್ತಿ ಕೇಂದ್ರವನ್ನು (Mass Transformer Repair Center) ಸ್ಥಾಪಿಸಲು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯಿಂದ ಟೆಂಡರ್ ಕರೆಯಲಾಗಿದೆ.

ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ವ್ಯಾಪ್ತಿಯಲ್ಲಿ ಬರುವ ದೇವದುರ್ಗದಲ್ಲಿ ಹೊಸದಾಗಿ ಪರಿವರ್ತಕಗಳ ದುರಸ್ತಿ ಕೇಂದ್ರವನ್ನು ಹಾಗೂ ಬಳ್ಳಾರಿಯಲ್ಲಿ ಹೆಚ್ಚುವರಿಯಾಗಿ ಪರಿವರ್ತಕಗಳ ದುರಸ್ತಿ ಕೇಂದ್ರವನ್ನು ಸ್ಥಾಪಿಸಲು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯಿಂದ ಟೆಂಡರ್ ಕರೆಯಲಾಗಿದೆ.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವ್ಯಾಪ್ತಿಯಲ್ಲಿ ಬರುವ ಹೊಳೆನರಸೀಪುರದಲ್ಲಿ ಹೊಸದಾಗಿ ಪರಿವರ್ತಕಗಳ ದುರಸ್ತಿ ಕೇಂದ್ರವನ್ನು ಹಾಗೂ ಮಂಡ್ಯದಲ್ಲಿ ಹೆಚ್ಚುವರಿಯಾಗಿ ಪರಿವರ್ತಕಗಳ ದುರಸ್ತಿ ಕೇಂದ್ರವನ್ನು ಸ್ಥಾಪಿಸಲು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತವು ಉದ್ದೇಶಿಸಿದೆ.

ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯ ವ್ಯಾಪ್ತಿಯಲ್ಲಿ ಬರುವ ಶಿಕಾರಿಪುರದಲ್ಲಿ ಹೊಸದಾಗಿ ಪರಿವರ್ತಕಗಳ ದುರಸ್ತಿ ಕೇಂದ್ರವನ್ನು ಸ್ಥಾಪಿಸಲು ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯಿಂದ ಟೆಂಡರ್ ಕರೆಯಲಾಗಿದೆ.

ಇ) ದುರಸ್ತಿಗೊಂಡ ಪರಿವರ್ತಕಗಳ ಗುಣಮಟ್ಟವನ್ನು ಕಾಪಾಡಲು ದುರಸ್ತಿಯ ಪ್ರತಿ ಹಂತದಲ್ಲಿ ಪರೀಕ್ಷಿಸಲು ಕ್ರಮ ಕೈಗೊಳ್ಳಲಾಗಿದೆ. ಶೀಘ್ರವಾಗಿ ಪರಿವರ್ತಕಗಳನ್ನು ದುರಸ್ತಿ ಮಾಡಿ ಅವುಗಳನ್ನು ಶೀಘ್ರವಾಗಿ ಬದಲಾಯಿಸುವ ಸಂಬಂಧ ವಿಭಾಗೀಯ ಮಟ್ಟದಲ್ಲಿ ದುರಸ್ತಿಗೆ ಅವಾರ್ಡ್ ಮಾಡಲು ಕ್ರಮ ಕೈಗೊಳ್ಳಲಾಗಿದೆ.

(ಈ) ಪರಿವರ್ತಕಗಳ ಕೊರತೆಯನ್ನು ನೀಗಿಸಲು ಖರೀದಿಯನ್ನು ಚುರುಕುಗೊಳಿಸಲಾಗಿದ್ದು, ಏಪ್ರಿಲ್ 2012 ರಿಂದ ಜೂನ್

2012ರ ಅಂತ್ಯದವರೆಗೆ ಒಟ್ಟು 3,081 ಪರಿವರ್ತಕಗಳನ್ನು ಖರೀದಿಸಲಾಗಿದೆ.

ಊ) ಅಕ್ರಮ ನೀರಾವರಿ ಪಂಪುಸೆಟ್ಟುಗಳನ್ನು ಸಕ್ರಮಗೊಳಿಸಿ ಅವುಗಳಿಗೆ ಮೂಲಭೂತ ಸೌಕರ್ಯ ನೀಡಿ ಈ ಯೋಜನೆಯಡಿ 3 ರಿಂದ 5 ಪಂಪುಸೆಟ್ಟುಗಳಿಗೆ ಒಂದು 25 ಕೆ.ವಿ.ಯ ಪರಿವರ್ತಕವನ್ನು ಸ್ಥಾಪಿಸಿ ಪರಿವರ್ತಕದ ವಿಫಲತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುವುದು.

ಋ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ "ನಿರಂತರ ಜ್ಯೋತಿ" ಎಂಬ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಕೃಷಿ ಮತ್ತು ಕೃಷಿಯೇತರ ಸ್ಥಾವರಗಳಿಗೆ ಪ್ರತ್ಯೇಕ ಫೀಡರ್‌ಗಳನ್ನು ಹಾಗೂ ಹೆಚ್ಚುವರಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವುದರಿಂದ, ಗ್ರಾಮಾಂತರ ಪ್ರದೇಶಗಳಲ್ಲಿ ಹಾಲಿ ಇರುವ ಫೀಡರ್‌ಗಳನ್ನು ವಿದ್ಯುತ್ ಹೊರೆಯು ಕಡಿಮೆಗೊಳ್ಳುತ್ತದೆ. ಇದರಿಂದ, ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ವಿಫಲತೆಯು ಕಡಿಮೆಗೊಂಡು, ಕೊರತೆಯನ್ನು ನೀಗಿಸಬಹುದಾಗಿದೆ. ಅಲ್ಲದೇ, ಈ ಯೋಜನೆಯಿಂದ ಕೆಪಾಸಿಟರ್ ಮೂಲಕ ನೀರಾವರಿ ಪಂಪುಸೆಟ್ಟುಗಳನ್ನು ಚಾಲನೆಗೊಳಿಸುವುದನ್ನು ತಡೆಗಟ್ಟಬಹುದಾಗಿದೆ.

ಌ) ತಾಂತ್ರಿಕ ದೋಷಗಳಿಂದ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ವಿಫಲವಾಗುವುದನ್ನು ಕಡಿಮೆ ಮಾಡಲು ವಿತರಣಾ ಟ್ರಾನ್ಸ್‌ಫಾರ್ಮರ್ ಕೇಂದ್ರಗಳಲ್ಲಿ ಹಾಗೂ ವಿದ್ಯುತ್ ಮಾರ್ಗಗಳಲ್ಲಿ ಅವಶ್ಯವಿರುವ ಎಲ್ಲಾ ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.